ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 24/04/2019

# ಅಪ್ಪಾಜಿಗೌಡಗೆ ಐಟಿ ನೋಟಿಸ್

**ಬೆಂಗಳೂರು:** ಕಾರಿನ ಸ್ಟೆಪ್ನಿ ಚಕ್ರದಲ್ಲಿ 2.30 ಕೋಟಿ ಹಣ ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆದಾಯ ತೆರಿಗೆ ಅಧಿಕಾರಿಗಳು ಮಾಜಿ ಶಾಸಕ ಅಪ್ಪಾಜಿ ಗೌಡರಿಗೆ ನೋಟಿಸ್ ನೀಡಿದ್ದಾರೆ. ವಿಚಾ ರ ಣೆಗೆ ಹಾಜರಾಗುವಂತೆ ಐಟಿ ಅಧಿಕಾರಿಗಳು ನೋಟಿಸ್‌ನಲ್ಲಿ ತಿಳಿಸಿದ್ದಾರೆ.



ಏ.20ರಂದು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು, ಭದ್ರಾವತಿ ಮಾರ್ಗವಾಗಿ ಬೆಂಗಳೂರಿನಿಂದ ಶಿವಮೊಗ್ಗಗೆ ತೆರಳುತ್ತಿದ್ದ ಕಾರೊಂ ದರ ಮೇಲೆ ದಾಳಿ ನಡೆಸಿದ್ದರು. ವಾಹನದ ಸ್ಟೆಪ್ನಿಯಲ್ಲಿ ಸಾಗಿಸುತ್ತಿದ್ದ 2,000 ರುಪಾಯಿ ಮುಖ ಬೆಲೆಯ 2.30 ಕೋಟಿ ರುಪಾಯಿಯನ್ನು ಜಪ್ತಿ ಮಾಡಿದ್ದರು. ಈ ಸಂಬಂಧ ಕಾರು ಚಾಲಕನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ, ಆ ಹಣ ಅಪ್ಪಾಜಿಗೌಡರಿಗೆ ತಲುಪಿಸಲು ಹೊರಟ್ಟಿದ್ದೆ ಎಂದು ಹೇಳಿದ್ದ ಎನ್ನಲಾಗಿದೆ. ಚಾಲಕ ನೀಡಿರುವ ಮಾಹಿತಿ ಮೇರೆಗೆ ಮಾಜಿ ಶಾಸಕ ಅಪ್ಪಾಜಿಗೌಡರಿಗೆ ಐಟಿ ಅಧಿಕಾರಿಗಳು ನೋಟಿಸ್ ನೀಡಿದ್ದಾರೆ. ಎರಡು ದಿನಗಳಲ್ಲಿ ವಿಚಾರ ಣೆಗೆ ಹಾಜರಾಗುವಂತೆ ನೋಟಿಸ್ ನೀಡಿದ್ದಾರೆ.

**ಇಂದು ವಿಚಾರಣೆಗೆ ಹಾಜರಾಗುವ ಸಾಧ್ಯತೆ:** ಮಂಗಳವಾರ ಶಿವಮೊಗ್ಗದ ಲೋಕಸಭಾ ಕ್ಷೇತ್ರದ ಮತದಾನ ನಡೆದಿದೆ. ಈ ಹಿನ್ನೆಲೆಯಲ್ಲಿ ಬುಧವಾರ ಅಪ್ಪಾಜಿಗೌಡ ವಿಚಾರಣೆಗೆ ಹಾಜರಾಗುವ ಸಾಧ್ಯತೆ ಇದೆ.

ಬೆಂಗಳೂರಿನ ಐಟಿ ಕಚೇರಿಯಲ್ಲಿ ವಿಚಾರಣೆಗೆ ಹಾರಾಗುವ ಸಾಧ್ಯತೆ ಇದೆ. ಪ್ರಕರಣ ಸಂಬಂಧ ಮಾಧ ಮಗಳಿಗೆ ಹೇಳಿಕೆ ನೀಡಿರುವ ಅಪ್ಪಾಜಿಗೌಡ, ಈ ಹಿಂದೆ ತಾನು ಸೈಟ್ ಮಾರಿದ್ದೆ. ಆ ಹಣವನ್ನು ವಾಪಸ್ ತರಿಸಿಕೊಳ್ಳುತ್ತಿರುವುದಾಗಿ ಹೇಳಿದ್ದರು.